Bruhat Bengaluru Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
# ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ
# ವಾರ್ಡ್ ಸಮಿತಿ ಸಭೆ ದಿನಾಂಕ: 05/06/2021 ರ
# ಸಭಾ ನಡವಳಿ

ದಿನಾಂಕ: 05/06/2021 ರಂದು ಬೆಳಿಗ್ಗೆ 10.30 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು Zoom Meeting ಆ್ಯಪ್‌ನ ಮೂಲಕ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

ಹಾಜರಿದ್ದವರು:

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳಿ | ಹುದ್ದೆ |
|---|---|---|
| 1 | ಶ್ರೀ ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ) ಹಾಗೂ ಕಾರ್ಯಪಾಲಕ ಅಭಿಯಂತರರು, ಉಪ ನಿರ್ದೇಶಕರ ಕಛೇರಿ ಕಟ್ಟಡ ಪರವಾನಗೆ ಕೋಶ–ಉತ್ತರ |
| 2 | ಶ್ರೀ ದಯಾನಂದ.ಎನ್ | ಸಹಾಯಕ ಅಭಿಯಂತರರು, ವಾರ್ಡ್–198, ಹೆಮ್ಮಿಗೆಪುರ |
| 3 | ಶ್ರೀ ರವಿಚಂದ್ರಚಾರಿ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.198, ಹೆಮ್ಮಿಗೆಪುರ |

ಶ್ರೀ ದಯಾನಂದ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಆನ್‌ಲೈನ್ ಸಭೆಗೆ ಹಾಜರಾಗಿದ್ದ ಅಧಿಕಾರಿಗಳನ್ನು ಹಾಗೂ Zoom



Scanned with CamScanner

Meeting ನಲ್ಲಿ ಭಾಗವಹಿಸಿದ್ದ ಎಲ್ಲರನ್ನೂ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಹಿಂದಿನ ಸಭಾ ನಡವಳಿಯನ್ನು ಓದಿ ರೆಕಾರ್ಡ್ ಮಾಡಲಾಯಿತು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

❖ **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-** ಅಧ್ಯಕ್ಷರು, ಕೋವಿಡ್-19ರ ಸಾಂಕ್ರಾಮಿಕ ರೋಗದ ಬಗ್ಗೆ ಹಾಗೂ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು ಹಾಗೂ ಕೋವಿಡ್ ಪರಿವೀಕ್ಷಣೆಯಿಂದ ಮೊದಲುಗೊಂಡು ಆಸ್ಪತ್ರೆಗೆ ದಾಖಲಾಗುವವರೆಗೆ ಮತ್ತು ಕೋವಿಡ್-19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್-19ರ ಪರೀಕ್ಷೆಯನ್ನು ಹೆಚ್ಚು ಮಾಡುವ ಬಗ್ಗೆ ಸಹಕರಿಸುವಂತೆ ಸಭೆಯಲ್ಲಿದ್ದ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರುಗಳು ಮತ್ತು ಅಧಿಕಾರಿ ವರ್ಗದವರಿಗೆ ವಿನಂತಿಸಿ, ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳು ಸದರಿಯವರನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸೂಚಿಸಿದರು ಮತ್ತು ಮಾಷಲ್‌ಗಳನ್ನು ನಿಯೋಜಿಸಿ ಮಾಸ್ಕ್ ಧರಿಸದೇ ಇರುವವರಿಗೆ ದಂಡವನ್ನು ವಿಧಿಸಲು ಸೂಚಿಸಲಾಯಿತು ಹಾಗೂ ಕೋವಿಡಡ್-19 ವ್ಯಾಕ್ಸಿನ್ ಲಸಿಕೆಗಳನ್ನು ನೀಡುತ್ತಿರುವ ಸ್ಥಳ ವಿವರಗಳನ್ನು ಸಭೆಗೆ ತಿಳಿಸಲಾಯಿತು ಮತ್ತು ದಿನಾಂಕ: 08/06/2021ರಂದು ವಯೋಮಿತಿ 18 ರಿಂದ 44 ವರ್ಷದೊಳಗಿನವರಿಗೆ ಉಚಿತವಾಗಿ ಕರೋನ ವ್ಯಾಕ್ಸಿನ್ ಚುಚ್ಚು ಮದ್ದು ನೀಡುವ ಅಭಿಯಾನ ಹಾಗೂ ಸ್ಥಳದ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು ಹಾಗೂ ಇದರ ಸದುಪಯೋಗ ಪಡೆಯಲು Zoom Meeting ನಲ್ಲಿ ಭಾಗವಹಿಸಿದ್ದ ಎಲ್ಲರಿಗೂ ಕೋರಲಾಯಿತು.

❖ **ಬೆಂಗಳೂರು ಜಲ ಮಂಡಳಿಗೆ ಸಂಬಂಧಿಸಿದ ದೂರಿನ ಬಗ್ಗೆ:-** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಿ.ಹೆಚ್.ಇ.ಎಲ್ ಬಡಾವಣೆಯಲ್ಲಿ 50 ಅಡಿ ಉದ್ದಕ್ಕೆ ಒಳಚರಂಡಿ ಮಾರ್ಗವನ್ನು ನಿರ್ಮಾಣ ಮಾಡಿರುವುದಿಲ್ಲವೆಂದು ಶ್ರೀ ಜಗನ್ನಾಥ್‌ರಾವ್‌ರವರು ಸಭೆಗೆ ತಿಳಿಸಿದರು ಮತ್ತು ವಾರ್ಡ್ ನಂ.198ರ ಬಸಪ್ಪ ಬಡಾವಣೆಯ 3ನೇ ಅಡ್ಡ ರಸ್ತೆಯಲ್ಲಿ ನೀರಿನ ಕೊಳವೆ ಲೋಕೇಜ್ ಆಗುತ್ತಿದ್ದು, ಸರಿಪಡಿವು ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ಸ್ಥಳ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲು ಜಲಮಂಡಳಿ ಅಧಿಕಾರಿರವರನ್ನು ಕೋರಲಾಯಿತು.

❖ **ಬೃಹತ್ ನೀರುಗಾಲುವೆ ವಿಭಾಗ, ರಾರಾ ನಗರ ವಲಯ:-** ವಾರ್ಡ್ ನಂ.198ರ ಮಳೆಗಾಲ ಪ್ರಾರಂಭವಾಗಿರುವ ಕಾರಣ ವಾಜರಹಳ್ಳಿ ಬಾಲಾಜಿ ಬಡಾವಣೆ, ಬಿ.ಸಿ.ಎಂ.ಸಿ ಬಡಾವಣೆ ಹಾಗೂ ಇತರೆ



Scanned with CamScanner

ಸ್ಥಳಗಳಲ್ಲಿ ಮಳೆ ಬಂದಂತಹ ಸಂಧರ್ಭದಲ್ಲಿ ಮಳೆನೀರು ಬೃಹತ್ ನೀರುಗಾಲುವೆಯಲ್ಲಿ ಸರಾಗವಾಗಿ ಹರಿಯುವಂತೆ ಅಗತ್ಯ ಕ್ರಮವಹಿಸಲು ಬೃಹತ್ ನೀರುಗಾಲುವೆ ಅಧಿಕಾರಿಗಳಿಗೆ ಕೋರಲಾಯಿತು.

❖ <u>ವಿದ್ಯುತ್ ಬೀದಿ ದೀಪಗಳ ನಿರ್ವಹಣೆ</u>:- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಾಜರಹಳ್ಳಿ ಬಾಲಾಜಿ ಬಡಾವಣೆಯಲ್ಲಿನ ಉದ್ಯಾನವನದಲ್ಲಿ ವಿದ್ಯುತ್ ದೀಪಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿಲ್ಲದಿರುವುದರ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲು ಪಾಲಿಕೆ ವಿದ್ಯುತ್ ವಿಭಾಗದ ಅಧಿಕಾರಿಯವರಿಗೆ ಕೋರಲಾಯಿತು.

(ದಯಾನಂದ.ಎನ್)
ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್-198, ಹೆಮ್ಮಿಗೆಪುರ

(ಶಿವಕುಮಾರ್)
ನೋಡಲ್ ಅಧಿಕಾರಿ
ವಾರ್ಡ್ ಸಮಿತಿ
ವಾರ್ಡ್-198, ಹೆಮ್ಮಿಗೆಪುರ

ಪ್ರತಿಯನ್ನು:-

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಸಲ್ಲಿಸಿದೆ.
2) ಕೌನ್ಸಿಲ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ. ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
4) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
5) ಅಧೀಕ್ಷಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
6) ಕಾರ್ಯಪಾಲಕ ಅಭಿಯಂತರರು (ಕೆಂಗೇರಿ ವಿಭಾಗ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಂದಾಯ ಅಧಿಕಾರಿಗಳು (ಕೆಂಗೇರಿ ವಲಯ) ರವರ ಮಾಹಿತಿಗಾಗಿ ಕಳುಹಿಸಿದೆ.
8) ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ) ರವರ ಅವಗಾಹನೆಗೆ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
10) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.



Scanned with CamScanner

12) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
13) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
14) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
15) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
16) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.



Scanned with CamScanner